# ಕರ್ನಾಟಕ ವಿಧಾನ ಪರಿಷತ್ತು

## ಶ್ರೀ ಟಿ.ಎ. ಶರವಣ ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರ 330 ರ ನಿಯಮದ ಮೇರೆಗೆ ಸೂಚನೆಗೆ ಉತ್ತರ

*********

**ಪ್ರಶ್ನೆ:-**

ಮಂಡ್ಯ ಲೋಕಸಭಾ ಕ್ಷೇತ್ರದ 08 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಬರುವ ಅಲ್ಪಸಂಖ್ಯಾತರ ಕಾಲೋನಿಗಳ ರಸ್ತೆ, ಚರಂಡಿ ಹಾಗೂ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲು ಕಡತ ಸಂಖ್ಯೆ:MWD-MDS/389/2024, ದಿನಾಂಕ:22-07-2024ರಂತೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಕಛೇರಿಗೆ ಕಡತ ಸಲ್ಲಿಕೆಯಾಗಿದ್ದು, ಅದರಂತೆ ಮಾನ್ಯ ಸಚಿವರು ಸದನದಲ್ಲಿ ಅನುದಾನ ಬಿಡುಗಡೆ ಮಾಡುವ ಕುರಿತು ಪರಿಶೀಲನೆಯಲ್ಲಿದೆ ಎಂದು ತಿಳಿಸಲಾಗಿರುತ್ತದೆ, ಆದರೆ ಈ ಕಡತ ಸಲ್ಲಿಕೆಯಾದ ನಂತರ ಮಾನ್ಯ ಸಚಿವರ ಆದೇಶದ ಮೇರೆಗೆ ಆರ್ಥಿಕ ಇಲಾಖೆಯ ಅನುಮೋದನೆ ಇಲ್ಲದೇ ರೂ.400.00 ಕೋಟಿಗಳಿಗಿಂತ ಹೆಚ್ಚು ಅನುದಾನದ ಆದೇಶ ಹೊರಡಿಸಿದ್ದು, ಆದರೆ ಈ ಕಡತಕ್ಕೆ ಅನುದಾನ ಬಿಡುಗಡೆ ಮಾಡದಿರಲು ಕಾರಣಗಳೇನು. ಈಗಾಗಲೇ ಮಾನ್ಯ ಸಚಿವರು ಆರ್ಥಿಕ ಇಲಾಖೆಯ ಅನುಮೋದನೆ ಇಲ್ಲದೇ ರೂ.400.00 ಕೋಟಿಗಳಿಗಿಂತ ಹೆಚ್ಚು ಅನುದಾನದ ಆದೇಶ ಹೊರಡಿಸುವಾಗ ಯಾವ ಯಾವ ಮಾನದಂಡಗಳನ್ನು ಅನುಸರಿಸಲಾಗಿದೆ ಎಂಬ ವಿಷಯದ ಬಗ್ಗೆ ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:-**

ಸರ್ಕಾರದ ಆದೇಶ ಸಂಖ್ಯೆ:MWD-MDS/226/2025, ಬೆಂಗಳೂರು ದಿನಾಂಕ: 25.02.2025ರಲ್ಲಿ 2024-25ನೇ ಸಾಲಿಗೆ ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ಅಲ್ಪಸಂಖ್ಯಾತರು ವಾಸಿಸುತ್ತಿರುವ ನಗರ ಪ್ರದೇಶಗಳಲ್ಲಿನ ಅತೀ ಹಿಂದುಳಿದ ಕಾಲೋನಿಗಳನ್ನು ಮಾದರಿ ಕಾಲೋನಿಗಳನ್ನಾಗಿ ಅಭಿವೃದ್ಧಿ ಪಡಿಸಲು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿದ್ದು, ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳ ಅಲ್ಪಸಂಖ್ಯಾತರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಅಭಿವೃದ್ಧಿ ಪಡಿಸಲು ಒಟ್ಟು ರೂ.398.00 ಕೋಟಿಗಳ (ಮೂರು ನೂರ ತೊಂಭತ್ತೆಂಟು ಕೋಟಿಗಳು ಮಾತ್ರ) ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಅನುದಾನವನ್ನು ಮಂಜೂರು ಮಾಡಿ, ಈ ಪೈಕಿ ಶೇ.50ರಷ್ಟು ಅನುದಾನವನ್ನು ಬಿಡುಗಡೆ ಮಾಡಲು ಆದೇಶಿಸಿದೆ.

ಮುಂದುವರೆದು, 2023-24 ಮತ್ತು 2024-25ನೇ ಸಾಲಿನಲ್ಲಿ ಮಂಡ್ಯ ಜಿಲ್ಲೆಗಳಲ್ಲಿನ ವಿಧಾನಸಭಾ ಕ್ಷೇತ್ರಗಳಿಗೆ ಒಟ್ಟು ರೂ.49.95 ಕೋಟಿಗಳನ್ನು ಮಂಜೂರು ಮಾಡಲಾಗಿರುತ್ತದೆ. ಮುಂದುವರೆದು ಮಂಡ್ಯ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಲ್ಪಸಂಖ್ಯಾತರ ಸಮುದಾಯದ ಜನರು ವಾಸಿಸುತ್ತಿರುವ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವ ಕುರಿತು ಕಡತ ಸಂಖ್ಯೆ:MWD-MDS/389/2024 ರಲ್ಲಿ ಪರಿಶೀಲನೆಯಲ್ಲಿದೆ.

**ಕಡತ ಸಂಖ್ಯೆ:** MWD 68 LMQ 2025

**(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು